# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೂಡಿ ಉಪವಿಭಾಗ, ಬೆಂಗಳೂರು-48.**

ಸಂ:ಬಿಬಿಎಂಪಿ/ಸಕಾಅ/ಹೂಉವಿ/27/2020-21 ದಿನಾಂಕ: 08.04.2021

**-:ದಿನಾಂಕ:07-04-2021 ರಂದು ನಡೆದ 54-ಹೂಡಿ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು:-**

ಮಾನ್ಯ ಆಯುಕ್ತರವರ ಆದೇಶದ ದಿನಾಂಕ:21-09-2020ರ ಮೇರೆಗೆ ವಾರ್ಡ್ ಸಮಿತಿಯನ್ನು ರಚಿಸಲಾಗಿದ್ದು, ದಿನಾಂಕ:07.04.2021 ರ ಬುಧುವಾರ ಬೆಳಗ್ಗೆ 11.30 ಕ್ಕೆ ವಾರ್ಡ್ ನಂ.54-ಹೂಡಿ ವಾರ್ಡ್ ಮಟ್ಟದ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ಸಭೆಯ ಅಧ್ಯಕ್ಷರಾದ ನೋಡಲ್ ಅಧಿಕಾರಿಗಳೂ ಸಭೆಯನ್ನು ಪ್ರಾರಂಭಿಸಿ ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸ್ಥಳೀಯ ಸಂಘ ಸಂಸ್ಥೆಯವರಿಗೆ ಸ್ವಾಗತ ಕೋರಿದ್ದು, ಸಭೆಯನ್ನು ಪ್ರಾರಂಭಿಸಿದರು.

**ಸಭೆಗೆ ಹಾಜರಿದ್ದವರು:-**

| ಕ್ರ.ಸಂ | ಹಾಜರಿದ್ದವರ ಹೆಸರು | ಪದನಾಮ ಅಥವಾ ಇಲಾಖೆ | ಹಾಜರಾತಿ |
|---|---|---|---|
| 1. | ಶ್ರೀಮತಿ.ಡಾ//ಕಲ್ಪನಾ | ಅಧ್ಯಕ್ಷರು ವಾರ್ಡ್ ನೋಡಲ್ ಅಧಿಕಾರಿಗಳು | ಹಾಜರಿದ್ದರು. |
| 2. | ಶ್ರೀ.ಶೇಖ್ ಮೊಹಿದ್ದೀನ್ | ಕಾರ್ಯದರ್ಶಿಗಳು ವಾರ್ಡ್ ಎ.ಇ | ಹಾಜರಿದ್ದರು. |
| 3. | ಶ್ರೀ.ನಾಗರಾಜ.ವಿ | ಹಿರಿಯ ಆರೋಗ್ಯ ಪರಿವೀಕ್ಷಕರು, | ಹಾಜರಿದ್ದರು. |
| 4. | ಶ್ರೀ.ವೀರಪ್ಪ | ಕಿರಿಯ ಆರೋಗ್ಯ ನೀರಿಕ್ಷಕರು, | ಹಾಜರಿದ್ದರು. |
| 5. | ಶ್ರೀ.ಟಿ.ಆರ್.ಸತೀಶ್ | ಆರ್.ಡಬ್ಲ್ಯೂ.ಎ. ಅದಯ್ಯಪ್ಪನಗರ | ಹಾಜರಿದ್ದರು. |
| 6. | ಶ್ರೀ.ಮಹೇಂದ್ರ ಪ್ರಸಾದ್ | ಆರ್.ಡಬ್ಲ್ಯೂ.ಎ. ಕೊಡಿಗೇಹಳ್ಳಿ | ಹಾಜರಿದ್ದರು. |
| 7. | ಶ್ರೀ.ವೆಂಕಟೇಶ್ ಕೆ ಆರ್ | ಮಾರ್ಷಲ್ ಹೂಡಿ | ಹಾಜರಿದ್ದರು. |
| 8. | ಶ್ರೀ.ಪ್ರಸಾದ್.ಎಂ | ಸಾದರಮಂಗಳ | ಹಾಜರಿದ್ದರು. |
| 9. | ಶ್ರೀ.ರಾಜಹಂಸ | ಅಯ್ಯಪ್ಪನಗರ | ಹಾಜರಿದ್ದರು. |
| 10. | ಶ್ರೀ.ಮಂಜುನಾಥ | ಆರ್.ಡಬ್ಲ್ಯೂ.ಎ. ಅದಯ್ಯಪ್ಪನಗರ | ಹಾಜರಿದ್ದರು. |

**ಸಭೆಯ ನಡುವಳಿಗಳು:-**

**ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-**

- ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಅಧ್ಯಕ್ಷರು ಭೈರತಿ ಆರೋಗ್ಯ ಸ್ವಾಮಿ ರವರು ವಾಟ್ಸ್‌ಪ್ ಗ್ರೂಪ್‌ನಲ್ಲಿ ಬ್ಲಾಕ್ ಸ್ಪಾಟ್‌ಗಳ ಪೋಟೋಗಳನ್ನು ಹಾಕುತ್ತಿರುತ್ತಾರೆ ಆದ್ದರಿಂದ ಇದನ್ನು ಸರಿಪಡಿಸಲು ಸೂಚಿಸಿದರು.
- ಸದರಿ ವಿಷಯವಾಗಿ ಕಿರಿಯ ಆರೋಗ್ಯ ನೀರಿಕ್ಷಕರಿಗೆ ಮುಂದಿನ ಸಭೆಗೆ ಹಾಜರಾಗುವ ಸಮಯಕ್ಕೆ ಈ ಎಲ್ಲಾ ಸಮಸ್ಯೆಗಳನ್ನು ಬಗೆ ಹರಿಸಲು ಸೂಚಿಸಿದರು.
- ಮಂಜುನಾಥ ಅಯ್ಯಪ್ಪನಗರ ರವರು ಅಯ್ಯಪ್ಪನಗರ 1ನೇ ಬ್ಲಾಕ್ ಮತ್ತು 2ನೇ ಬ್ಲಾಕ್‌ಗಳಲ್ಲಿ ಒಣ ತ್ಯಾಜ್ಯ ಸಂಗ್ರಹಣೆಗೆ ಸರಿಯಾಗಿ ಬರುತ್ತಿರುವುದಿಲ್ಲ ಎಂದು ತಿಳಿಸಿದರು.
- ಅಧ್ಯಕ್ಷರು ಒಣ ತ್ಯಾಜ್ಯ ಸಂಗ್ರಹಿಸುವ ಶ್ರೀ ಶಕ್ತಿ ಸಂಘದವರಾದ ನಾಗರತ್ನ ರವರಿಗೆ ತಿಳಿಸಿ ಸರಿಯಾದ ಸಮಯಕ್ಕೆ ಒಣ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಲು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್,ಎಸ್.ಬಿ(BWSSB):-**

- ಸತೀಶ್ ಅಯ್ಯಪ್ಪನಗರ ರವರು ಬಿ.ಡಬ್ಲ್ಯೂ.ಎಸ್,ಎಸ್.ಬಿ ಯಿಂದ ಬರುವ ನೀರು ಕಳೆದ 15 ದಿನಗಳಿಂದ ಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ.
- ಮಂಜುನಾಥ ಅಯ್ಯಪ್ಪನಗರ ರವರು ಸಹ ಅಯ್ಯಪ್ಪನಗರ ಶಿರಿಡಿ ಬಡಾವಣೆ ಹಾಗೂ ಇನ್ನು ಸುತ್ತಮುತ್ತಲ ಪ್ರದೇಶಗಳಲ್ಲಿ ನೀರು ಬರುತ್ತಿರುವುದಿಲ್ಲ ಎಂದು ತಿಳಿಸಿರುತ್ತಾರೆ.
- ಅಧ್ಯಕ್ಷರು ಬಿ.ಡಬ್ಲ್ಯೂ.ಎಸ್,ಎಸ್.ಬಿ ಎಇಇ ರವರಿಗೆ ದೂರವಾಣಿ, ವಿಡಿಯೋ ಕಾಲ್ ಮುಖಾಂತರ ಮಾತನಾಡಿ ಬಂದಿದ್ದು. ಸಾರ್ವಜನಿಕರೊಂದಿಗೆ ಮಾತನಾಡಿದರು ಸದರಿ ರವರು ದೂರಿಗೆ ಸಂಬಂಧಿಸಿದಂತೆ ಒಂದು ವಾರದ ಸಮಯವನ್ನು ನೀಡಿ ಈ ಎಲ್ಲಾ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಾಧ್ಯವಾದಷ್ಟು ಬಗೆಹರಿಸುವುದಾಗಿ ತಿಳಿಸಿದರು.
- ಪ್ರಸಾದ್ ಕೊಡಿಗೇಹಳ್ಳಿ ರವರು ಅಯ್ಯಪ್ಪನಗರ ಕೊಡಿಗೇಹಳ್ಳಿ ಮುಖ್ಯರಸ್ತೆಯಲ್ಲಿ ಒಂದು ಬಿ.ಡಬ್ಲ್ಯೂ.ಎಸ್,ಎಸ್.ಬಿ ಛೆಂಬರ್ ಓವರ್‌ಪೋಲ್ ಆಗುತ್ತಿದ್ದು ಇದನ್ನು ಆದಷ್ಟು ಬೇಗ ಸರಿಪಡಿಸಲು ಕೊರಿದರು.
- ಅಧ್ಯಕ್ಷರು ಎಇ ಬಿ.ಡಬ್ಲ್ಯೂ.ಎಸ್,ಎಸ್.ಬಿ ರವರಿಗೆ ತಿಳಿಸಿ ಸರಿಪಡಿಸುವುದಾಗಿ ಸೂಚಿಸಿದರು.

**ಕಾಮಗಾರಿ ಇಲಾಖೆ**

- ವಾರ್ಡ್ ಕಾಮಗಾರಿ ಸಂಬಂಧಿಸಿದಂತೆ ಈಗಾಗಲೇ ಟೆಂಡರ್ ಕರೆಯಲಾಗಿರುವ ಕಾಮಗಾರಿಗಳನ್ನು ಕೂಡಲೇ ಪ್ರಾರಂಭಿಸಿ ಕಾಮಗಾರಿಯನ್ನು ಪೂರ್ಣಗೊಳಿಸಲು ತಿಳಿಸಿದರು.

**ವಿದ್ಯುತ್**

- ಬೀದಿ ದೀಪಗಳ ನಿರ್ವಹಣೆ ಬಗ್ಗೆ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ಆಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಲು ಸೂಚಿಸಿದರು.
- ಸಭೆಯಲ್ಲಿದ್ದ ಸಾರ್ವಜನಿಕರು ಬೀದಿದೀಪಗಳ ದೂರುಗಳು ಬಂದ ತಕ್ಷಣ ಸರಿಪಡಿಸುತ್ತೇವೆಂದು ತಿಳಿಸಿದರು.

**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

Covid-19 Contact Tracing ಮತ್ತು Testing ಮಾಡುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು. ಸಮಿತಿ ಸಭೆಗೆ ಆಗಮಿಸಿದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸಂಘ ಸಂಸ್ಥೆಯ ಸದಸ್ಯರಿಗೂ ನೋಡಲ್ ಅಧಿಕಾರಿಗಳಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ನೊಡಲ್ ಅಧಿಕಾರಿ
ಡಾ//ಕಲ್ಪನಾ. ಹೂಡಿ–54
ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ
ಮಹದೇವಪುರ ವಲಯ

ವಾರ್ಡ್ ಸಮಿತಿ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ–54 ಹೂಡಿ
ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ
ಮಹದೇವಪುರ ವಲಯ